ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು 1 ನೇ ಅಧಿಕ ಜೆಎಂಎಫ್‌ಸಿ ನ್ಯಾಯಾಲಯ
ರಾಣೇಬೆನ್ನೂರು.
ಸಿ.ಸಿ.ಸಂಖ್ಯೆ: 80/2023

ಪಿ ಡಬ್ಲ್ಯೂ: 4
ಸಿ ಡಬ್ಲ್ಯೂ: 7

| | | |
|---|---|---|
| ಸಾಕ್ಷಿಯ ಹೆಸರು | : | ಮಲ್ಲಪ್ಪ ಹಕ್ಕೆ |
| ತಂದೆಯ ಹೆಸರು | : | ವಿಷ್ಣು |
| ವಯಸ್ಸು | : | 37 |
| ಉದ್ಯೋಗ | : | ಅಬಕಾರಿ ನಿರೀಕ್ಷಕರು |
| ವಾಸಸ್ಥಳ | : | ರಾಣೇಬೆನ್ನೂರು |

ದಿನಾಂಕ: 01-04-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ನಾನು 20-01-2025 ರಿಂದ ಪ್ರಸ್ತುತವಾಗಿ ರಾಣೇಬೆನ್ನೂರು ಅಬಕಾರಿ ವಲಯದಲ್ಲಿ ಅಬಕಾರಿ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ.

ದಿನಾಂಕ 30-03-2023 ರಂದು ಚಾ ಸಾ 1 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆಯನ್ನು ಮುಂದುವರೆಸಿರುತ್ತೇನೆ. ದಿನಾಂಕ 01-04-2023 ರಂದು ಚಾ ಸಾ 4 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿನಾಂಕ 03-04-2023 ರಂದು ಚಾ ಸಾ 4 ರವರೊಂದಿಗೆ ಘಟನಾ ಸ್ಥಳಕ್ಕೆ ಬೇಟಿ ನೀಡಿ ಸ್ಥಳ ಪರಿಶೀಲನೆ ಮಾಡಲಾಯಿತು. ಸ್ಥಳ ಪರಿಶೀಲನಾ ವರದಿಯನ್ನು ನಿಪಿ 9 ಎಂದು, ಅದರಲ್ಲಿರುವ ಸಾಕ್ಷಿದಾರರ ಸಹಿಯನ್ನು ನಿಪಿ 9 ಎ ಎಂದು ಗುರುತಿಸಲಾಯಿತು. ದಿನಾಂಕ 10-04-2023 ರಂದು ವಾಹನದ ಮಾಲೀಕತ್ವ ಕೋರಿ ಎ ಆರ್ ಟಿ ಓ ರಾಣೇಬೆನ್ನೂರು ವಿಭಾಗಕ್ಕೆ ಮನವಿ ಪತ್ರ ಬರೆಯಲಾಯಿತು. ಅದರಂತೆ ಅವರು ನೀಡಿದ ವರದಿಯನ್ನು ಸ್ವೀಕರಿಸಿಕೊಳ್ಳಲಾಯಿತು. ದಿನಾಂಕ 24-04-2023 ರಂದು ಮಾದರಿ ಮದ್ಯವನ್ನು ರಾಸಾಯನಿಕ ವಿಶ್ಲೇಷಣೆಗಾಗಿ ಧಾರವಾಡದ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಯಿತು. ದಿನಾಂಕ 04-05-2023 ರಂದು ರಾಸಾಯನಿಕ ವಿಶ್ಲೇಷಣಾ ವರದಿಯನ್ನು ಚಾ ಸಾ 4 ರವರಿಂದ ಸ್ವೀಕರಿಸಿ, ಹೇಳಿಕೆ ಪಡೆದುಕೊಂಡಿರುತ್ತೇನೆ. ಸದರಿ ಮನವಿ ಪತ್ರ ಹಾಗೂ ವರದಿಯು ಈಗಾಗಲೇ ನಿಪಿ 7 ಮತ್ತು ನಿಪಿ 8 ಎಂದು ಗುರುತಿಸಲಾಯಿತು. ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ನಿಪಿ 7 ಬಿ ಮತ್ತು ನಿಪಿ 8 ಬಿ ಎಂದು ಗುರುತಿಸಲಾಯಿತು.

ದಿನಾಂಕ 23-05-2023 ವಾಹನದ ಮಾಲೀಕನಿಗೆ ವಿಚಾರಣೆ ಹಾಜರಾಗಲು ನೋಟಿಸ್ ನೀಡಲಾಯಿತು. ದಿನಾಂಕ 27-05-2023 ರಂದು ಮಾಹನದ ಮಾಲೀಕರಿಗೆ ಜ್ಞಾಪನಾ ಪತ್ರವನ್ನು ಹೊರಡಿಸಲಾಯಿತು. ಸದರಿ ಜ್ಞಾಪನಾ ಪತ್ರವನ್ನು ನೋಡುತ್ತಿದ್ದು ನಿಪಿ 10 ಎಂದು, ಅದರಲ್ಲಿರುವ ಸಾಕ್ಷಿದಾರರ ಸಹಿಯನ್ನು ನಿಪಿ 10 ಎ ಎಂದು ಗುರುತಿಸಲಾಯಿತು. ದಿನಾಂಕ 30-05-2023 ರಂದು ಚಾ ಸಾ 5 ರವರು ವಾಹನದ ಮಾಲೀಕನು ವಿಳಾಸದಿಂದ ತಲಮರೆಸಿಕೊಂಡಿರುವ ಬಗ್ಗೆ ನೀಡಿದ ವರದಿಯನ್ನು ಸ್ವೀಕರಿಸಿಕೊಂಡಿರುತ್ತೇನೆ. ಅದೇ ದಿನ ಕಲಂ 65 ಬಿ ಪ್ರಮಾಣ ಪತ್ರವನ್ನು ಸ್ವೀಕರಿಸಲಾಯಿತು. ದಿನಾಂಕ 15-05-2023 ರಂದು ಜಪ್ತಾದ ವಾಹನಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಪ್ರಾದೇಶಿಕ ಅಧಿಕಾರಿಗಳಿಗೆ ಪತ್ರ ಬರೆಯಲಾಯಿತು. ನಂತರ ಪ್ರಕರಣದ ತನಿಖೆಯನ್ನು ಪೂರ್ಣಗೊಳಿಸಿ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಲಾಯಿತು. ಬಿ ಎಕ್ಸ್ಟ್ರ್ಯಾಕ್ಟ್ ಮನವಿ ಪತ್ರ ಮತ್ತು ವರದಿಯನ್ನು ನಿಪಿ 11 ಮತ್ತು ನಿಪಿ 12 ಎಂದು, ಅದರಲ್ಲಿರುವ ಸಾಕ್ಷಿದಾರರ ಸಹಿಗಳನ್ನು ನಿಪಿ 11 ಎ ಮತ್ತು ನಿಪಿ 12 ಎ ಎಂದು ಗುರುತಿಸಲಾಯಿತು. ಒಂದು ಪೋಟೋವನ್ನು ನಿಪಿ 13 ಎಂದು ಗುರುತಿಸಲಾಯಿತು.

ಮು.ಮಾ.1 ಎಂದು ಗುರುತಿಸಲಾಗಿರುವ ಮಾದರಿ ಮದ್ಯವನ್ನು ನೋಡಿ ಗುರುತಿಸಿರುತ್ತಾರೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಗುರುತಿಸುತ್ತೇನೆ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:</u>**

ಘಟನಾ ದಿನದಂದು ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದರೆ ಸರಿ. ಚಾ ಸಾ 4 ರವರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಘಟನಾ ಸ,ಳದ ಪರಿಶೀಲನೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ವಾಹನದ ಮಾಲೀಕತ್ವದ ಕುರಿತು ಯಾವುದೇ ಮಾಹಿತಿಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಮುದ್ದೆ ಮಾಲುಗಳನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಿಲ್ಲ, ಯಾವುದೇ ವರದಿಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಯು ಯಾವುದೇ ತಪ್ಪು ಮಾಡಿಲ್ಲ ಎಂದು ಕಂಡುಬಂದರೂ ಸಹ ಠಾಣೆಯಲ್ಲಿ ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಮುದ್ದೆ ಮಾಲುಗಳನ್ನು ನಾವೇ ಸೃಷ್ಟಿಸಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಅಂಕಿ ಸಂಖ್ಯೆಗಳಿಗೋಸ್ಕರ ಆರೋಪಿತನ ವಿರುದ್ದ ಸುಳ್ಳು ದೋಷಾರೋಪಣೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮುದ್ದೆ ಮಾಲುಗಳಲ್ಲಿ ಲೇಬಲ್ ನಂಬರ್ ಗಳು ಇಲ್ಲದ ಕಾರಣ ಯಾವ ಅಂಗಡಿಯಿಂದ ಖರೀದಿ ಮಾಡಿರುತ್ತಾರೆ ಎಂದು ನಮಗೆ ತಿಳಿದಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಮುದ್ದೆ ಮಾಲಿಗೂ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ.

ಪಿ ಡಬ್ಲ್ಯೂ: 4

ಮರು ವಿಚಾರಣೆ ಇಲ್ಲ.

ತೆ.ನ್ಯಾ.ದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. C/c.ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.